Re. No. D. 221

This contains the Kannada text of 2 Acts

सत्यमेव जयते

# भारत का राजपत्र
# The Gazette of India
# ಭಾರತ ರಾಜ ಪತ್ರ

( EXTRAORDINARY )
( ವಿಶೇಷ ಸಂಚಿಕೆ )

भाग IX अनुभाग 1
PART IX SECTION 1
ಭಾಗ IX ವಿಭಾಗ 1

प्राधिकार से प्रकाशित
Published by Authority
ಪ್ರಾಧಿಕಾರದ ಮೇರೆಗೆ ಪ್ರಕಟಿಸಲಾಗಿದೆ.

सं. २ नई दिल्ली, गुरुवार, दिसम्बर ३१, २००९ पुष्या १०, १९३१ (शका) खंड. ४२
No. 2 New Delhi, Thursday, December 31, 2009 Pushya 10, 1931 (Saka) Vol. 42
ಸಂ. ೨ ನವ ದೆಹಲಿ, ಗುರುವಾರ, ಡಿಸೆಂಬರ್ ೩೧, ೨೦೦೯ ಪುಷ್ಯ ೧೦, ೧೯೩೧ (ಶಕ) ಸಂಪುಟ. ೪೨

**Ministry of Law and Justice**

(Legislative Department)

New Delhi, 31st December, 2009

**ಕಾನೂನು ಮತ್ತು ನ್ಯಾಯ ಮಂತ್ರಾಲಯ**

(ವಿಧಾಯೀ ಇಲಾಖೆ)

ನವದೆಹಲಿ, 31ನೇ ಡಿಸೆಂಬರ್, 2009

The Translation in Kannada of the following Acts, namely :- (1) The National Institute of Pharmaceutical Education and Research Act, 1998, & (2) The Central Road Fund Act, 2000 - are hereby published under the authority of the President and shall be deemed to be authoritative texts thereof in Kannada under clause (a) of section 2 of the Authoritative Texts (Central Laws) Act, 1973 (50 of 1973).

ಈ ಕೆಳಕಂಡ ಅಧಿನಿಯಮಗಳು, ಎಂದರೆ :- (1) ರಾಷ್ಟ್ರೀಯ ಔಷಧೀಯ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆ ಅಧಿನಿಯಮ, 1998 ಹಾಗೂ (2) ಕೇಂದ್ರ ರಸ್ತೆ ನಿಧಿ ಅಧಿನಿಯಮ, 2000 – ಇವುಗಳ ಕನ್ನಡ ಭಾಷಾಂತರವನ್ನು ರಾಷ್ಟ್ರಪತಿಯವರ ಪ್ರಾಧಿಕಾರದ ಮೇರೆಗೆ ಪ್ರಕಟಿಸಲಾಗಿದೆ ಮತ್ತು ಅಧಿಕೃತ ಪಾಠಗಳ (ಕೇಂದ್ರ ಕಾನೂನುಗಳು) ಅಧಿನಿಯಮ, 1973 (1973ರ 50)ರ 2ನೇ ಪ್ರಕರಣದ (ಎ) ಖಂಡದ ಮೇರೆಗೆ ಇವುಗಳನ್ನು ಈ ಅಧಿನಿಯಮಗಳ ಅಧಿಕೃತ ಕನ್ನಡ ಪಾಠವೆಂದು ಭಾವಿಸತಕ್ಕದ್ದು.

# ರಾಷ್ಟ್ರೀಯ ಔಷಧೀಯ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆ ಅಧಿನಿಯಮ, 1998

**(1998ರ ಅಧಿನಿಯಮ ಸಂಖ್ಯೆ 13)**

**[ಜೂನ್ 26, 1998]**

ರಾಷ್ಟ್ರೀಯ ಔಷಧೀಯ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆ ಎಂಬ ಹೆಸರಿನ ಸಂಸ್ಥೆಯನ್ನು ರಾಷ್ಟ್ರೀಯ ಮಹತ್ವದ ಸಂಸ್ಥೆಯೆಂದು ಘೋಷಿಸುವುದಕ್ಕಾಗಿ ಮತ್ತು ಅದನ್ನು ನಿಗಮನಗೊಳಿಸುವುದಕ್ಕಾಗಿ ಮತ್ತು ಅದಕ್ಕೆ ಸಂಬಂಧಿಸಿದ ವಿಷಯಗಳಿಗಾಗಿ ಉಪಬಂಧ ಕಲ್ಪಿಸುವ ಅಧಿನಿಯಮ.

ಭಾರತ ಗಣರಾಜ್ಯದ ನಲವತ್ತೊಂಬತ್ತನೆಯ ವರ್ಷದಲ್ಲಿ ಸಂಸತ್ತಿನಿಂದ ಈ ಕೆಳಕಂಡಂತೆ ಅಧಿನಿಯಮಿತವಾಗತಕ್ಕದ್ದು:-

## ಅಧ್ಯಾಯ – I

### ಪ್ರಾರಂಭಿಕ

1. **ಚಿಕ್ಕ ಹೆಸರು ಮತ್ತು ಪ್ರಾರಂಭ.**– (1) ಈ ಅಧಿನಿಯಮವನ್ನು ರಾಷ್ಟ್ರೀಯ ಔಷಧೀಯ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆ ಅಧಿನಿಯಮ, 1998 ಎಂದು ಕರೆಯತಕ್ಕದ್ದು.

(2) ಇದು ಕೇಂದ್ರ ಸರ್ಕಾರವು ರಾಜಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು ಮತ್ತು ಈ ಅಧಿನಿಯಮದ ಬೇರೆ ಬೇರೆ ಉಪಬಂಧಗಳಿಗಾಗಿ ಬೇರೆ ಬೇರೆ ದಿನಾಂಕಗಳನ್ನು ಗೊತ್ತುಪಡಿಸಬಹುದು.

2. **ರಾಷ್ಟ್ರೀಯ ಔಷಧೀಯ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆಯನ್ನು ರಾಷ್ಟ್ರೀಯ ಮಹತ್ವದ ಸಂಸ್ಥೆ ಎಂದು ಘೋಷಿಸುವುದು.**– ರಾಷ್ಟ್ರೀಯ ಔಷಧೀಯ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆ, ಸೆಕ್ಟರ್–67, ಎಸ್.ಎ.ಎಸ್. ನಗರ (ಮೊಹಾಲಿ), ಜಿಲ್ಲೆ ರೊಪಾರ್, ಪಂಜಾಬ್ ಎಂಬ ಹೆಸರಿನ ಸಂಸ್ಥೆಯ ಉದ್ದೇಶಗಳು ರಾಷ್ಟ್ರೀಯ ಮಹತ್ವದ ಸಂಸ್ಥೆಯನ್ನಾಗಿ ಮಾಡುವಂಥವುಗಳಾಗಿರುವುದರಿಂದ ರಾಷ್ಟ್ರೀಯ ಔಷಧೀಯ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆಯನ್ನು ಒಂದು ರಾಷ್ಟ್ರೀಯ ಮಹತ್ವದ ಸಂಸ್ಥೆ ಎಂದು ಈ ಮೂಲಕ ಘೋಷಿಸಲಾಗಿದೆ.

3. **ಪರಿಭಾಷೆಗಳು.**– ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,–

(ಎ) "ಗೊತ್ತುಪಡಿಸಿದ ದಿನ" ಎಂದರೆ 4ನೇ ಪ್ರಕರಣದ (1)ನೇ ಉಪಪ್ರಕರಣದ ಮೇರೆಗೆ ರಾಷ್ಟ್ರೀಯ ಔಷಧೀಯ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆಯ ಸ್ಥಾಪನೆಯ ದಿನಾಂಕ ಎಂದು ಅರ್ಥ;

(ಬಿ) "ಮಂಡಳಿ" ಎಂದರೆ 4ನೇ ಪ್ರಕರಣದ (3)ನೇ ಉಪಪ್ರಕರಣದ ಮೇರೆಗೆ ರಚಿಸಲಾದ ಸಂಸ್ಥೆಯ ಆಡಳಿತ ಮಂಡಳಿ ಎಂದು ಅರ್ಥ;

(ಸಿ) "ಅಧ್ಯಕ್ಷ" ಎಂದರೆ 4ನೇ ಪ್ರಕರಣದ (3)ನೇ ಉಪಪ್ರಕರಣದ (ಎ) ಖಂಡದ ಮೇರೆಗೆ ನಾಮನಿರ್ದೇಶಿತನಾದ ಸಂಸ್ಥೆಯ ಅಧ್ಯಕ್ಷ ಎಂದು ಅರ್ಥ;

(ಡಿ) "ಡೀನ್" ಎಂದರೆ 17ನೇ ಪ್ರಕರಣದ ಮೇರೆಗೆ ನೇಮಕಗೊಂಡ ಸಂಸ್ಥೆಯ ಡೀನ್ ಎಂದು ಅರ್ಥ;

(ಇ) "ನಿರ್ದೇಶಕ" ಎಂದರೆ 16ನೇ ಪ್ರಕರಣದ ಮೇರೆಗೆ ನೇಮಕಗೊಂಡ ಸಂಸ್ಥೆಯ ನಿರ್ದೇಶಕ ಎಂದು ಅರ್ಥ;

(ಎಫ್) "ನಿಧಿ" ಎಂದರೆ 21ನೇ ಪ್ರಕರಣದ ಮೇರೆಗೆ ನಿರ್ವಹಿಸಲಾಗುವ ಸಂಸ್ಥೆಯ ನಿಧಿ ಎಂದು ಅರ್ಥ;

(ಜಿ) "ಸಂಸ್ಥೆ' ಎಂದರೆ 4ನೇ ಪ್ರಕರಣದ (1)ನೇ ಉಪಪ್ರಕರಣದ ಅಥವಾ (2ಎ) ಉಪಪ್ರಕರಣದ ಮೇರೆಗೆ ಸ್ಥಾಪಿಸಲಾದ ರಾಷ್ಟ್ರೀಯ ಔಷಧೀಯ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆ ಎಂದು ಅರ್ಥ;